**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡಾವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖಾವ್ಯಾಪ್ತಿಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ಸಹಾಯಕ ಪಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ:151:ಡಿಸಿಇ:2021, ದಿ.29.01.2021 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ:151:ಡಿಸಿಇ: 2020, ದಿನಾಂಕ: .29.06.2021.
2. ಸರ್ಕಾರದ ಪತ್ರ ಸಂಖ್ಯೆ: ಇಡಿ:185:ಡಿಸಿಇ:20223 (ಇ) ದಿನಾಂಕ.31.07.2023.
3. ಈ ಕಛೇರಿ ಸಮ ಸಂಖ್ಯೆಯ ಅಧಿಸೂಚನೆ ದಿನಾಂಕ:27.07.2023 ಮತ್ತು ದಿನಾಂಕ:02.08.2023 ರಂತೆ ಪ್ರಕಟಿಸಲಾದ ವರ್ಗಾವಣೆಯ ಅಂತಿಮ ಆದ್ಯತಾ ಪಟ್ಟಿ.

*****

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ರೂಪಿಸಿ ಉಲ್ಲೇಖ (1)ರಂತೆ ಅಧಿಸೂಚಿಸಿ ದಿನಾಂಕ:29.01.2021ರಿಂದ ಜಾರಿಗೊಳಿಸಲಾಗಿರುತ್ತದೆ.

ಸರ್ಕಾರವು ಉಲ್ಲೇಖ(2)ರ ಪತ್ರದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಬೋಧಕ ಸಿಬ್ಬಂದಿಗಳ ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಗಳನ್ನು 2023ನೇ ಸಾಲಿಗೆ ದಿನಾಂಕ:10.08.2023ರ ಒಳಗಾಗಿ ಅಂತಿಮಗೊಳಿಸಲು ಅನುಮತಿ ನೀಡಿರುತ್ತದೆ.

ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳಲ್ಲಿನ ಅವಕಾಶಗಳನ್ವಯ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗೆ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಕಡ್ಡಾಯ ವರ್ಗಾವಣೆಯಿಂದ ವಿನಾಯಿತಿ ಬಯಸುವ ಬೋಧಕರಿಂದ ಆನ್‌ಲೈನ್ ಮೂಲಕ ನಿಗದಿತ ಕೊನೆಯ ದಿನಾಂಕದೊಳಗೆ ಸ್ವೀಕೃತವಾದ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಯ ಅರ್ಜಿ ಹಾಗೂ ಕಡ್ಡಾಯ ವರ್ಗಾವಣೆಯಿಂದ ವಿನಾಯಿತಿ ಕೋರಲಾದ ಮನವಿಗಳನ್ನು ನಿಯಮಾನುಸಾರ ಪರಿಶೀಲಿಸಿ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ಅಂತಿಮ ಆದ್ಯತಾ ಪಟ್ಟಿ ಹಾಗೂ ವಿಶೇಷ ಪ್ರಕರಣಗಳಡಿ ಕೋರಿಕೆ ವರ್ಗಾವಣೆಗೆ ಅರ್ಹರಿರುವ ಬೋಧಕರ ಅಂತಿಮ ಆದ್ಯತಾ ಪಟ್ಟಿಗಳನ್ನು ತಯಾರಿಸಿ ಆನ್‌ಲೈನ್ ಮೂಲಕ ಕೌನ್ಸಿಲಿಂಗ್ ನಡೆಸಿದ್ದು, ಸದರಿ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡ ಡಾ.ಅರುಣ್ ಕುಮಾರ್ ಗಾಲಿ, ಗಣಿತಶಾಸ್ತ್ರ ಸಹ ಪ್ರಾಧ್ಯಾಪಕರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟೆ, ಇವರನ್ನು ವರ್ಗಾಯಿಸಲು ಈ ಆದೇಶ.

**ಆದೇಶ ಸಂಖ್ಯೆ:ಡಿಸಿಇ:ಟಿಆರ್‌ಎನ್:ಟಿಆರ್‌ಎನ್:24:2023:ವ&ನಿ, ಬೆಂಗಳೂರು ದಿನಾಂಕ:09.08.2023**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ದಿನಾಂಕ:04.08.2023ರಂದು ನಡೆದ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡ ಡಾ.ಅರುಣ್ ಕುಮಾರ್ ಗಾಲಿ, ಗಣಿತಶಾಸ್ತ್ರ ಸಹ ಪ್ರಾಧ್ಯಾಪಕರು,

ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟೆ ಇವರನ್ನು ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಡಲಗೇರಿ, ಮುದ್ದೇಬಿಹಾಳ (ತಾ) ಇಲ್ಲಿಗೆ ವರ್ಗಾಯಿಸಿ ಆದೇಶಿಸಿದೆ.

ಆಯುಕ್ತರು 9/8/2023
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ- ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟೆ
2. ಪ್ರಾಂಶುಪಾಲರು, ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಡಲಗೇರಿ, ಮುದ್ದೇಬಿಹಾಳ (ತಾ)
3. ಡಾ.ಅರುಣ್ ಕುಮಾರ್ ಗಾಲಿ, ಗಣಿತಶಾಸ್ತ್ರ ಸಹ ಪ್ರಾಧ್ಯಾಪಕರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾಗಲಕೋಟೆ

ಪ್ರತಿಯನ್ನು – ಮಾಹಿತಿಗಾಗಿ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಕಾಲೇಜು ಶಿಕ್ಷಣ ನಿರ್ದೇಶಕರು/ಮುಖ್ಯ ಆಡಳಿತಾಧಿಕಾರಿಗಳು ಕಾಲೇಜು ಶಿಕ್ಷಣ ಆಯುಕ್ತಾಲಯ ಬೆಂಗಳೂರು
4. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು - ಮಾಹಿತಿಗಾಗಿ.
5. ಜಂಟಿನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು – ಮಾಹಿತಿಗಾಗಿ.
6. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ.